ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : **1559(1877)**
ಸದಸ್ಯರ ಹೆಸರು : ಡಾ: ವೈ.ಎ ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 22.03.2021
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ದಿನಾಂಕ:01.08.2008ರ ನಂತರ ನೇಮಕಾತಿ ಹೊಂದಿರುವ ಸರ್ಕಾರಿ ಮತ್ತು ಅನುದಾನಿತ ಪ್ರೌಢಶಾಲಾ ಶಿಕ್ಷಕರಿಗೆ ಹಾಗೂ ಉಪನ್ಯಾಸಕರಿಗೆ ವಿಶೇಷ ಭತ್ಯೆ ಮಂಜೂರಾಗದೆ ತಾರತಮ್ಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ)	ಸದರಿ ಶಿಕ್ಷಕರು ಮತ್ತು ಉಪನ್ಯಾಸಕರುಗಳಿಗೆ ವಿಶೇಷ ಭತ್ಯೆನ್ನು ವಸೂಲು ಮಾಡುವಂತೆ ಸರ್ಕಾರವು ಆದೇಶಿಸಿದ್ದು, ಇದಕ್ಕೆ ಕಾರಣಕರ್ತರಾದ ಬಡವಾಡೆ ಅಧಿಕಾರಿ/ನೌಕರರ ಮೇಲೆ ಏನು ಕ್ರಮ ಕೈಗೊಳ್ಳಲಾಗಿದೆ? (ಮಾಹಿತಿ ನೀಡುವುದು)	ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ವರದಿ ಸ್ಥಳೀಯ ಸಂಸ್ಥೆಗಳು, ಇವರ ಮಾರ್ಚ್ 2017ಕ್ಕೆ ಕೊನೆಗೊಂಡ ವರದಿಯ ಕಂಡಿಕೆ 2.1ರಲ್ಲಿ ಸರ್ಕಾರದ ಆದೇಶಗಳಿಗೆ ವಿರುದ್ಧವಾಗಿ ಬಟವಾಡೆ ಅಧಿಕಾರಿಗಳು ದಿನಾಂಕ:01/08/2008ರ ನಂತರ ನೇಮಕಗೊಂಡ ಶಿಕ್ಷಕರುಗಳಿಗೆ ವಿಶೇಷ ಭತ್ಯೆಯನ್ನು ಪಾವತಿಸಿದ್ದು, ಸದರಿ ಮೊತ್ತವನ್ನು (ಪ್ರಾಥಮಿಕ ರೂ.1.27 ಮತ್ತು ರೂ. ಪ್ರೌಢ–5.13 ಕೋಟಿ) ಸಂಬಂಧಿಸಿದ ಶಿಕ್ಷಕರಿಂದ ವಸೂಲಿಯ ಕುರಿತು ಆಕ್ಷೇಪಣೆಯಂತೆ ಕ್ರಮವಹಿಸಲಾಗುತ್ತಿದೆ. ದಿನಾಂಕ:05/02/2020ರ ಪತ್ರದಲ್ಲಿ ದಿನಾಂಕ:01/08/2008ರ ನಂತರ ನೇಮಕಗೊಂಡ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರುಗಳಿಗೆ ಸರ್ಕಾರದ ಆದೇಶಗಳನ್ನು ಉಲ್ಲಂಘಿಸಿ ನಿಯಮಬಾಹಿರವಾಗಿ ಪಾವತಿಸಿರುವ ಮೊತ್ತವನ್ನು ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳಿಂದ ವಸೂಲಿ ಮಾಡಿ ಸರ್ಕಾರದ ಶೀರ್ಷಿಕೆಗೆ ಜಮೆ ಮಾಡಲು ತಿಳಿಸಿದೆ.

ಸಂಖ್ಯೆ: ಇಪಿ 74 ಎಸ್‌ಎಲ್‌ಬಿ 2021

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು